## 121. ಪಾಲಿಕೆ ವಾರ್ಡ್‌ವಾರು ಪುನರ್ ವಿಂಗಡಣೆ ಕರಡು ಅಧಿಸೂಚನೆ

ಬಿಬಿಎಂಪಿ ಚುನಾವಣೆ ಹೊಸ್ತಿಲಲ್ಲಿ ಇರುವಾಗಲೇ 198 ವಾರ್ಡ್‌ಗಳನ್ನು ಪುನರ್ ವಿಂಗಡಣೆ ಮಾಡಿ ಸರ್ಕಾರ ಅಧಿಸೂಚನೆ ಪ್ರಕಟಿಸಿದೆ.

ಕಳೆದ 2011ರ ಜನಗಣತಿ ಆಧಾರದ ಮೇಲೆ ಮುನಿಸಿಪಲ್ ಕಾರ್ಪೊರೇಷನ್ ಕಾಯಿದೆ–1976, ಕಲಂ (7)(2)(ಎ) ಅನ್ವಯ ಈ ಮರುವಿಂಗಡಣೆ ಮಾಡಲಾಗಿದ್ದು, ಬಿಬಿಎಂಪಿಯ ಬಹುತೇಕ ವಾರ್ಡ್‌ಗಳ ಸಂಖ್ಯೆ ಬದಲಾವಣೆಯಾಗಿದ್ದರೆ ಇನ್ನೂ ಕೆಲ ವಾರ್ಡ್‌ಗಳ ಹೆಸರು ಬದಲಾಗಿದೆ.

ಬಿಬಿಎಂಪಿಯು 2007ರಲ್ಲಿ ರಚನೆಯಾಗಿದ್ದು, 198 ವಾರ್ಡ್‌ಗಳನ್ನು ಅಂದಿನ ಜನಸಂಖ್ಯೆ ಮಾಹಿತಿ ಆಧರಿಸಿ ವಿಂಗಡಿಸಲಾಗಿತ್ತು. ನಂತರ 2011ರ ಜನಗಣತಿ ಆಧಾರದ ಮೇಲೆ ಪುನರ್ ವಿಂಗಡಿಸುವ ಪ್ರಕ್ರಿಯೆ ಇತ್ತೀಚೆಗೆ ಶುರುವಾಗಿತ್ತು.

ಕಳೆದ ಮಾರ್ಚ್‌ನಲ್ಲಿ ವಾರ್ಡ್‌ವಾರು ಕ್ಷೇತ್ರ ಪುನರ್ ವಿಂಗಡಿಸಿ ಕರಡು ಅಧಿಸೂಚನೆ ಹೊರಡಿಸಿ 15 ದಿನಗಳ ಕಾಲ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಅದರಂತೆ ಸಲ್ಲಿಕೆಯಾಗಿದ್ದ ಆಕ್ಷೇಪಣೆಗಳು, ಸಲಹೆಗಳನ್ನು ಪರಿಶೀಲಿಸಿ ಕೆಲವನ್ನು ಪರಿಗಣಿಸಲಾಗಿತ್ತು. ಅದರಂತೆ 2011ರ ಜನಗಣತಿಯ ಆಧಾರದ ಮೇರೆಗೆ ಬಿಬಿಎಂಪಿಯ 198 ವಾರ್ಡ್‌ಗಳನ್ನು ಪುನರ್‌ವಿಂಗಡಿಸಿ ಅಧಿಸೂಚನೆ ಹೊರಡಿಸಲಾಗಿದೆ.

ಬಿಬಿಎಂಪಿಯಲ್ಲಿ ಜನಪ್ರತಿನಿಧಿಗಳ ಆಡಳಿತಾವಧಿ ಸೆಪ್ಟೆಂಬರ್‌ಗೆ ಅಂತ್ಯವಾಗಲಿದ್ದು, ಮುಂದೆ ನಡೆಯುವ ಚುನಾವಣೆಗೆ ಅಧಿಸೂಚನೆಯಲ್ಲಿ ಹೊರಡಿಸುವ ವಾರ್ಡ್ ಪುನರ್ ವಿಂಗಡಣೆ ಆಧಾರದ ಮೇಲೆ ಮತದಾನ ನಡೆಯಲಿದೆ. ಈ ಸಂಬಂಧ ರಾಜ್ಯಪತ್ರ ಹೊರಡಿಸಿದ ದಿನ ಸಾರ್ವಜನಿಕರಿಗೆ ಪ್ರತಿ ಲಭ್ಯವಾಗಲಿದೆ. ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿರುವುದರಿಂದ ಹಾಗೂ ಬಿಬಿಎಂಪಿ ಆಡಳಿತವೂ ಬಿಜೆಪಿ ಕೈಯಲ್ಲಿರುವುದರಿಂದ ಸಹಜವಾಗಿ ಆ ಪಕ್ಷಕ್ಕೆ ಅನುಕೂಲವಾಗುವ ಸಾಧ್ಯತೆ ಇದೆ.

ಆಧಾರ:ಉದಯವಾಣಿ, ದಿನಾಂಕ:25.06.2020